**ದಿನಾಂಕ: 18-06-2022 ರಂದು ಬೆಳಗ್ಗೆ 11:30 ಗಂಟೆಗೆ ವಾರ್ಡ್ ಸಂಖ್ಯೆ 165 ಗಣೇಶ ಮಂದಿರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.**

*ಹಾಜರಿದ್ದ ಅಧಿಕಾರಿಗಳು:-*

1. ಶ್ರೀ. ಟಿ. ಎನ್. ತ್ಯಾಗರಾಜು – ಅಧ್ಯಕ್ಷರು ಮತ್ತು ನೋಡೆಲ್ ಅಧಿಕಾರಿಗಳು.
2. ಶ್ರೀ. ಮೋಹಿತ್. ಆರ್ – ಸಹಾಯಕ ಅಭಿಯಂತರರು (ವಾರ್ಡ್ 165 ಗಣೇಶ ಮಂದಿರ) (ಕಿಯೋನಿಕ್ಸ್)
3. ಶ್ರೀ. ಸೋಮಶೇಖರ್ – ಹಿ.ಆ.ಪ (ವಾರ್ಡ್ 165 ಗಣೇಶ ಮಂದಿರ)
4. ಶ್ರೀ. ಪವನ್ – ಕಿ.ಆ.ಪ (ವಾರ್ಡ್ 165 ಗಣೇಶ ಮಂದಿರ)
5. ಶ್ರೀಮತಿ. ಕವಿತ – ಸ.ಕಾ.ನಿ.ಅ (ಬೆಸ್ಕಾಂ)
6. ಶ್ರೀ. ಸಯ್ಯದ್ – ಸ.ಅ (ಬಿಡಬ್ಲ್ಯೂಎಸ್ಎಸ್‌ಬಿ)
7. ಶ್ರೀ. ಟಿ.ಹೆಚ್. ತಿಮ್ಮಯ್ಯ – ಪೊಲೀಸ್ ಅಧಿಕಾರಿ (ಬನಶಂಕರಿ)

ಮೇಲೆ ಹಾಜರಿದ್ದ ಅಧಿಕಾರಿಗಳು ಹಾಗೂ ಸಮಿತಿ ಸದಸ್ಯರ ಸಮ್ಮುಖದಲ್ಲಿ ವಾರ್ಡ್ ಸಂಖ್ಯೆ 165 ರ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು (ಕಿಯೋನಿಕ್ಸ್) ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು ಸದಸ್ಯರ ಮುಖ ಪರಿಚಯದೊಂದಿಗೆ ವಿವರಿಸುತ್ತಾ, ಹಾಜರಿದ್ದ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ಸ್ವಾಗತ ಕೋರಿದರು.

ಬೆಸ್ಕಾಂ ಅಧಿಕಾರಿಗಳು ಮಾತನಾಡಿ ವಾರ್ಡ್ ವ್ಯಾಪ್ತಿಯ ಬನಶಂಕರಿ 2ನೇ ಹಂತದಲ್ಲಿರುವ ಬೆಸ್ಕಾಂ ಕಛೇರಿಯ ಬಳಿ ಕಸವನ್ನು ಹಾಕಿರುವುದರಿಂದ ಬೆಸ್ಕಾಂ ಅಧಿಕಾರಿ ನೌಕರರುಗಳಿಗೆ ಹಾಗೂ ಸಾರ್ವಜನಿಕರ ಓಡಾಟಕ್ಕೆ ತುಂಬಾ ತೊಂದರೆಯಾಗಿರುತ್ತದೆ. ಸದರಿ ಸ್ಥಳದಲ್ಲಿ ಡೆಬ್ರಿಸ್ ಕೂಡ ಹೆಚ್ಚಾಗಿರುತ್ತದೆ. ಆದ್ದರಿಂದ ಸದರಿ ಸ್ಥಳದಲ್ಲಿರುವ ಕಸ ಹಾಗೂ ಡೆಬ್ರಿಸ್ ಅನ್ನು ವಿಲೇವಾರಿ ಮಾಡಿ ಸ್ವಚ್ಚಗೊಳಿಸಿ ಸದರಿ ಸ್ಥಳವನ್ನು ಪಾರ್ಕಿಂಗ್ ವ್ಯವಸ್ಥೆ ಮಾಡಿ ಕೊಡಲು ಕೋರಿದರು. ಮತ್ತು ಸದರಿ ಕಛೇರಿಯ ಆವರಣದಲ್ಲಿರುವ ಮರದ ರೆಂಬೆ ಕೊಂಬೆಗಳು ಕಛೇರಿಯ ಒಳಗೆ ಬಂದಿರುತ್ತದೆ ಆದ್ದರಿಂದ ಸದರಿ ರೆಂಬೆಕೊಂಬೆಗಳನ್ನು ಕತ್ತರಿಸಲು ಕೋರಿದರು. ಸದರಿ ವಿಷಯವಾಗಿ ಅಧ್ಯಕ್ಷರು ರವರು ಮಾತನಾಡಿ ಸದರಿ ಸ್ಥಳದಲ್ಲಿರುವ ತ್ಯಾಜ್ಯವನ್ನು ಸ್ವಚ್ಚಗೊಳಿಸಲು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಿದರು. ಹಾಗೂ ಸದರಿ ಸ್ಥಳದ ಡೆಬ್ರಿಸ್‌ಅನ್ನು ವಿಲೇವಾರಿ ಮಾಡಿ ಸಾರ್ವಜನಿಕರ ಓಡಾಟಕ್ಕೆ ಅನುಕೂಲ ಮಾಡಿಕೊಡಲು ಸಹಾಯಕ ಅಭಿಯಂತರರಿಗೆ ಸೂಚಿಸಿದರು. ನಂತರ ಕಛೇರಿಯಲ್ಲಿ ಇರುವ ಮರದ ರೆಂಬೆಗಳನ್ನು ತೆರವುಗೊಳಿಸಲು ಅರಣ್ಯಾಧಿಕಾರಿಗಳಿಗೆ ಸೂಚಿಸಲಾಯಿತು.

ವಾರ್ಡ್ ವ್ಯಾಪ್ತಿಯ ಸಿಟಿ ಬೆಡ್‌ನಲ್ಲಿ ಧರಣಿ ಟ್ರಾವಲ್ಸ್ ಸಂಸ್ಥೆಯವರ ವಾಹನಗಳನ್ನು ನಿಲ್ಲಿಸಿರುತ್ತಾರೆ. ಆದ್ದರಿಂದ ಟ್ರಾಫಿಕ್ ಸಮಸ್ಯೆ ಉಂಟಾಗಿರುತ್ತದೆ. ಅದಕ್ಕೆ ಸದರಿ ವಾಹನಗಳನ್ನು ತೆರವುಗೊಳಿಸಲು ಟ್ರಾಫಿಕ್ ಪೊಲೀಸ್ ರವರಿಗೆ ಸೂಚಿಸಲಾಯಿತು.

ವಾರ್ಡ್‌ನ ಬನಶಂಕರಿ 2ನೇ ಹಂತದಲ್ಲಿರುವ 30ನೇ ಅಡ್ಡರಸ್ತೆಯಲ್ಲಿ ಒಳಚರಂಡಿ ಪೈಪ್‌ಗಳು ಹಾಳಾಗಿ ನೀರು ಸೋರುವಿಕೆ ಸಮಸ್ಯೆ ಉಂಟಾಗಿರುತ್ತದೆ ಎಂದು ತಿಳಿಸಿದರು. ಅದಕ್ಕೆ ಸದರಿ ರಸ್ತೆಯ ಒಳಚರಂಡಿ ಪೈಪ್‌ಗಳನ್ನು ಸರಿಪಡಿಸುವಂತೆ ಬಿಡಬ್ಲ್ಯೂಎಸ್ಎಸ್‌ಬಿ ರವರಿಗೆ ಸೂಚಿಸಲಾಯಿತು.

ಮು.ತಿ.ನೋ

ವಾರ್ಡ್ ವ್ಯಾಪ್ತಿಯಲ್ಲಿ ಬನಶಂಕರಿ 2ನೇ ಹಂತದ 27ನೇ ಅಡ್ಡರಸ್ತೆಯಲ್ಲಿ ಚರಂಡಿಯು ತೆರೆಯಲಾಗಿರುತ್ತದೆ. ಸದರಿ ಚರಂಡಿಯನ್ನು ಮುಚ್ಚುವಂತೆ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.

ಬನಶಂಕರಿ 2ನೇ ಹಂತದ 16ನೇ ಮುಖ್ಯರಸ್ತೆಯಲ್ಲಿ ನಿರ್ಮಿಸಲಾಗುತ್ತಿರುವ ಕಟ್ಟಡದ ಮಾಲೀಕರು ಕಟ್ಟಡದ ಕಾಮಗಾರಿ ಸಾಮಾಗ್ರಿಗಳನ್ನು ರಸ್ತೆಯಲ್ಲಿ ಹಾಕಿರುವುದರಿಂದ ಸಾರ್ವಜನಿಕರ ಓಡಾಟಕ್ಕೆ ಅನಾನುಕೂಲವಾಗಿರುತ್ತದೆ ಎಂದು ದೂರು ನೀಡಿದರು. ಸದರಿ ಸಮಾಗ್ರಿಗಳನ್ನು ಈ ಕೂಡಲೇ ತೆರವುಗೊಳಿಸಲು ಸಹಾಯಕ ಅಭಿಯಂತರರು ರವರಿಗೆ ಸೂಚಿಸಲಾಯಿತು.

ಸಮಿತಿ ಸದಸ್ಯರು ಮಾತನಾಡಿ ವಾರ್ಡ್ ವ್ಯಾಪ್ತಿಯ ಬನಶಂಕರಿ 2ನೇ ಹಂತದಲ್ಲಿ ರಸ್ತೆಗುಂಡಿಗಳು ಇರುವುದರಿಂದ ಸಾರ್ವಜನಿಕ ವಾಹನ ಓಡಾಟಕ್ಕೆ ತೊಂದರೆಯುಂಟಾಗಿರುತ್ತದೆ ಆದ್ದರಿಂದ ಆದಷ್ಟು ಬೇಗ ರಸ್ತೆ ಗುಂಡಿಗಳನ್ನು ಮುಚ್ಚಲು ಕೋರಿದರು. ಅದರಂತೆ ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ 165 ರವರಿಗೆ ರಸ್ತೆ ಗುಂಡಿಗಳನ್ನು ಮುಚ್ಚಲು ಕ್ರಮ ವಹಿಸುವಂತೆ ಸೂಚಿಸಲಾಯಿತು.

ವಾರ್ಡ್ ಸಮಿತಿ ಸಭೆಯಲ್ಲಿ ಸಮಿತಿಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿ ರವರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿನ ಮೂಲಭೂತ ಸೌಕರ್ಯಗಳಾದ ರಸ್ತೆಗುಂಡಿ ಮುಚ್ಚುವಿಕೆ, ಕಟ್ಟಡ ತ್ಯಾಜ್ಯ ವಿಲೇವಾರಿ, ಘನತ್ಯಾಜ್ಯ ವಿಲೇವಾರಿ, ಬೆಸ್ಕಾಂ ಸಂಬಂಧಿತ, ಜಲಮಂಡಳಿ ಸಂಬಂಧಿತ, ಆರೋಗ್ಯ ಇಲಾಖೆ ಹಾಗೂ ಇನ್ನಿತರೆ ಸೌಲಭ್ಯಗಳಿಗೆ ಸಂಬಂಧಿಸಿದಂತೆ ಸಮರ್ಪಕ ಕಾರ್ಯನಿರ್ವಹಣೆಯ ಬಗ್ಗೆ ಆಯಾ ಇಲಾಖೆಗಳ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು ಸದಸ್ಯರಿಗೆ ವಿವರಿಸಿದರು.

ಈ ಎಲ್ಲಾ ವಿಷಯದ ಬಗ್ಗೆ ಚರ್ಚಿಸಲಾಗಿ ಸೂಕ್ತ ಕ್ರಮ ಕೈಗೊಳ್ಳುವ ನಿರೀಕ್ಷಣೆಯೊಂದಿಗೆ ಶ್ರೀ. ತ್ಯಾಗರಾಜು, ಅಧ್ಯಕ್ಷರು ರವರು ಎಲ್ಲರಿಗೂ ವಂದನೆಗಳನ್ನು ಕೋರುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ನೋಡೆಲ್ ಅಧಿಕಾರಿ
ವಾರ್ಡ್ ಸಂಖ್ಯೆ 165
ಗಣೇಶ ಮಂದಿರ